**Akashvani : Bangalore**
**National Bulletin In Kannada**
**09.06.2024 / 7.35 am**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**09.06.2024 / 7.35 am**

**<><*<><>*><>**

<u>ಮುಖ್ಯಾಂಶಗಳು</u>

**೧. ಸತತ ಮೂರನೇ ಬಾರಿ ಪ್ರಧಾನಮಂತ್ರಿಯಾಗಿ ನರೇಂದ್ರ ಮೋದಿ ಇಂದು ಪ್ರಮಾಣವಚನ ಸ್ವೀಕಾರ**

**೨. ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ಭಾಗವಹಿಸಲು ವಿದೇಶಿ ಗಣ್ಯರಿಗೆ ಆಹ್ವಾನ; ನವದೆಹಲಿಯಲ್ಲಿ ಬಿಗಿ ಬಂದೋಬಸ್ತ್**

**೩. ೨೦೨೨-೨೩ ರಲ್ಲಿ ದೇಶದ ಗ್ರಾಮೀಣ ಭಾಗದ ಗೃಹಬಳಕೆಯ ವೆಚ್ಚ ನಗರಪ್ರದೇಶಿಕ್ಕಿಂತ ಶೇಕಡ ೭೧ ರಷ್ಟು ಕಡಿಮೆ- ಎಂಪಿಸಿಇ ಸಮೀಕ್ಷೆ ವರದಿ**

**೪. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಇಂದು ಭಾರತ - ಪಾಕಿಸ್ತಾನ ತಂಡಗಳು ಮುಖಾಮುಖಿ**

**<><*<><>*><>**

ನಿಯೋಜಿತ ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಕೇಂದ್ರದ ನೂತನ ಸಚಿವರ ಪ್ರಮಾಣವಚನ ಸ್ವೀಕಾರ ಸಮಾರಂಭ ಇಂದು ಸಂಜೆ ರಾಷ್ಟ್ರಪತಿ ಭವನದಲ್ಲಿ ನಡೆಯಲಿದೆ. ನರೇಂದ್ರ ಮೋದಿ ಹಾಗೂ ಅವರ ಸಚಿವ ಸಂಪುಟದ ಸದಸ್ಯರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣವಚನ ಬೋಧಿಸಲಿದ್ದಾರೆ. ನರೇಂದ್ರ ಮೋದಿ ಅವರ ಪ್ರಮಾಣ ವಚನ ಸ್ವೀಕಾರ ಸಮಾರಂಭಕ್ಕೆ ನೆರೆಹೊರೆ ರಾಷ್ಟ್ರಗಳ ಹಲವು ನಾಯಕರನ್ನು ಆಹ್ವಾನಿಸಲಾಗಿದೆ. ಶ್ರೀಲಂಕಾದ ಅಧ್ಯಕ್ಷ ರಾಣಿಲ್ ವಿಕ್ರಮ ಸಿಂಘೆ, ಮಾಲ್ಡೀವ್ಸ್ ಅಧ್ಯಕ್ಷ ಡಾ.ಮೊಹಮ್ಮದ್ ಮುಯಿಝು, ಬಾಂಗ್ಲಾದೇಶದ ಪ್ರಧಾನಮಂತ್ರಿ ಶೇಖ್ ಹಸೀನ, ಮಾರಿಷಸ್ ಪ್ರಧಾನಿ ಪ್ರವೀಂದ್ ಕುಮಾರ್ ಜುಗ್ನೌತ್, ನೇಪಾಳದ ಪ್ರಧಾನಿ ಪುಷ್ಪಕಮಲ್ ದಹಲ್ ಪ್ರಚಂಡ, ಭೂತಾನ್ ಪ್ರಧಾನಿ ಶೆರಿಂಗ್ ಟೊಬ್ಗೆ ಮತ್ತು ಪೂರ್ವ ಆಫ್ರಿಕಾದ ರಾಷ್ಟ್ರವಾದ ಸೀಶೆಲ್‌ನ ಉಪರಾಷ್ಟ್ರಪತಿ ಅಹ್ಮದ್ ಅಫೀಫ್ ಭಾಗವಹಿಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಪ್ರಮಾಣವಚನ ಸಮಾರಂಭದಲ್ಲಿ ಭಾಗವಹಿಸಲಿರುವ ವಿದೇಶಿ ಗಣ್ಯರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಸಂಜೆ ಔತಣಕೂಟ ಏರ್ಪಡಿಸಿದ್ದಾರೆ. ಪ್ರಮಾಣ ವಚನ ಸ್ವೀಕಾರ

ಸಮಾರಂಭಕ್ಕೆ ದೆಹಲಿ ಪೊಲೀಸರು ಬಿಗಿಬಂದೋಬಸ್ತ್ ಮಾಡಿದ್ದಾರೆ. ಯಾವುದೇ ರೀತಿಯ ಅಹಿತಕರ ಘಟನೆಗಳಿಗೆ ಆಸ್ಪದವಾಗದಂತೆ ಸುರಕ್ಷತೆ ಮತ್ತು ಭದ್ರತೆ ಕಾಯ್ದುಕೊಳ್ಳಲು ಕಠಿಣ ಕ್ರಮಗಳನ್ನು ಕೈಗೊಂಡಿದ್ದಾರೆ. ಪ್ರಮಾಣ ವಚನ ಸ್ವೀಕಾರ ಸಮಾರಂಭದ ಸಂದರ್ಭದಲ್ಲಿ ಬಿಸಿಗಾಳಿ ತುಂಬಿದ ಬಲೂನ್‌ಗಳು, ಪ್ಯಾರಾಗ್ಲೈಡರ್‌ಗಳು, ಮಾನವ ರಹಿತ ವೈಮಾನಿಕ ವಾಹನಗಳ ಹಾರಾಟ ಸೇರಿದಂತೆ ಇನ್ನಿತರ ಹಾರಾಟಗಳನ್ನು ನಿಷೇಧಿಸಲಾಗಿದೆ. ನಿಷೇಧಾಜ್ಞೆ ಮುಂದಿನ ಎರಡು ದಿನಗಳವರೆಗೆ ಜಾರಿಯಲ್ಲಿರುತ್ತದೆ. ದೆಹಲಿಯ ಆಕಾಶವಾಣಿಯಲ್ಲಿ, ಪ್ರಮಾಣವಚನ ಸ್ವೀಕಾರ ಸಮಾರಂಭ ಕುರಿತು ಸಂಜೆ ೬.೪೫ರ ನಂತರ ವೀಕ್ಷಕ-ವಿವರಣೆ ಕೇಳಬಹುದಾಗಿದೆ. ಎಫ್‌ಎಂ ಗೋಲ್ಡ್, ಇಂದ್ರಪ್ರಸ್ಥ ಹಾಗೂ ಆಕಾಶವಾಣಿ ಲೈವ್ ನ್ಯೂಸ್ ಟ್ವೆಂಟಿಫೋರ್ ಇಂಟು ಸೆವೆನ್ ಚಾಲನ್‌ಗಳಲ್ಲೂ ಕಾರ್ಯಕ್ರಮ ಬಿತ್ತರಗೊಳ್ಳಲಿದ್ದು, ಆಕಾಶವಾಣಿ ಅಧಿಕೃತ ಯುಟ್ಯೂಬ್ ಚಾನಲ್‌ನಲ್ಲೂ ಆಲಿಸಬಹುದಾಗಿದೆ. ಬೆಂಗಳೂರು ಸೇರಿದಂತೆ ಅಹಮದಾಬಾದ್, ಚೆನ್ನೈ, ಕಟಕ್, ಗುಹಾಹತಿ, ಹೈದರಾಬಾದ್, ಇಂಫಾಲ್, ಕೋಲ್ಕತ್ತಾ, ಮುಂಬೈ, ತಿರುವನಂತಪುರಂ ಕೇಂದ್ರಗಳಿಂದ ಪ್ರಾದೇಶಿಕ ಭಾಷೆಗಳಲ್ಲಿ ವೀಕ್ಷಕ ವಿವರಣೆ ಕೇಳಬಹುದಾಗಿದೆ.

**<><*<><>*><>**

ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷರಾಗಿ ಹಿರಿಯ ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಅವರು, ಸರ್ವಾನುಮತದಿಂದ ಆಯ್ಕೆಯಾಗಿದ್ದಾರೆ. ಈ ಹುದ್ದೆಯನ್ನು ನಿಭಾಯಿಸಲು ಸೋನಿಯಾ ಗಾಂಧಿಯವರ ಸಮ್ಮತಿಸಿದ್ದಾರೆ ಎಂದು ಪಕ್ಷದ ನಾಯಕ ರಾಜೀವ್ ಶುಕ್ಲಾ ದೆಹಲಿಯಲ್ಲಿ ನಿನ್ನೆ ಸುದ್ದಿಗಾರರಿಗೆ ತಿಳಿಸಿದ್ದಾರೆ. ಇದಕ್ಕೂ ಮುನ್ನ ನಡೆದ ಕಾಂಗ್ರೆಸ್ ಕಾರ್ಯಕಾರಿಣಿ ಸಮಿತಿ- ಸಿಡಬ್ಲ್ಯುಸಿ ಯಲ್ಲಿ, ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕನ ಪಾತ್ರ ನಿರ್ವಹಿಸುವಂತೆ ರಾಹುಲ್ ಗಾಂಧಿ ಅವರನ್ನು ಮನವಿ ಮಾಡಿಕೊಳ್ಳುವ ಸಂಬಂಧ ಸರ್ವಾನುಮತದ ನಿರ್ಣಯ ಕೈಗೊಳ್ಳಲಾಗಿದೆ. ದೆಹಲಿಯಲ್ಲಿ ನಿನ್ನೆ ನಡೆದ ಮುಂದುವರೆದ ಸಿಡಬ್ಲ್ಯುಸಿ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಹಿರಿಯ ಕಾಂಗ್ರೆಸ್ ಮುಖಂಡ ಕೆ.ಸಿ.ವೇಣುಗೋಪಾಲ್ ರಾಹುಲ್ ಗಾಂಧಿ ಅವರ ನಾಯಕತ್ವದಲ್ಲಿ ಬಲಿಷ್ಠ ಹಾಗೂ ಜಾಗರೂಕ ಪ್ರತಿಪಕ್ಷ ರೂಪುಗೊಳ್ಳಲಿದೆ ಎಂಬ ವಿಶ್ವಾಸ ಕಾಂಗ್ರೆಸ್ ಕಾರ್ಯಕಾರಿ ಸಮಿತಿಗೆ ಇದೆ ಎಂದು ಹೇಳಿದರು. ಇದಕ್ಕೂ ಮುನ್ನ ಮುಂದುವರೆದ ಕಾಂಗ್ರೆಸ್ ಕಾರ್ಯಕಾರಣಿ ಸಭೆಯಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪ್ರತಿಕೂಲ ಪರಿಸ್ಥಿತಿಯಲ್ಲೂ ಚುನಾವಣೆಯನ್ನು ಎದುರಿಸಿ, ಜಯಗಳಿಸಿದ ನೂತನ ಕಾಂಗ್ರೆಸ್ ಸಂಸದರನ್ನು ಅಭಿನಂದಿಸಿದರು. ಪ್ರಜಾಪ್ರಭುತ್ವ ಮತ್ತು ಸಂವಿಧಾನ ರಕ್ಷಣೆಗಾಗಿ ಕಾಂಗ್ರೆಸ್ ಪಕ್ಷಕ್ಕೆ ದೇಶಾದ್ಯಂತ ವ್ಯಾಪಕ ಬೆಂಬಲ ದೊರೆತಿದೆ. ಇಂಡಿ ಒಕ್ಕೂಟದ ಪಾಲುದಾರ ಪಕ್ಷಗಳ ಜೊತೆ ಕಾಂಗ್ರೆಸ್ ಒಗ್ಗೂಡಿ ಸಂಸತ್ತಿನ ಒಳಗೆ ಮತ್ತು ಹೊರಗೆ

ಕೆಲಸ ಮಾಡಲಿದೆ ಎಂದರು ಸ್ಪಷ್ಟಪಡಿಸಿದರು. ಸಭೆಯಲ್ಲಿ ಹಿರಿಯ ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಪಕ್ಷದ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ ಸೇರಿದಂತೆ ಇತರರು ಭಾಗವಹಿಸಿದ್ದರು.

<><*<><>*><>

೨೦೨೨ರ ಆಗಸ್ಟ್‌ನಿಂದ ೨೦೨೩ರ ಜುಲೈ ಅವಧಿಯಲ್ಲಿ ದೇಶದ ಗ್ರಾಮೀಣ ಭಾಗದ ಮಾಸಿಕ ಸರಾಸರಿ ಗೃಹಬಳಕೆ ವೆಚ್ಚ ನಗರಪ್ರದೇಶಕ್ಕಿಂತ ಶೇಕಡಾ ೭೧ರಷ್ಟು ಕಡಿಮೆ ದಾಖಲಾಗಿದೆ ಎಂದು ಅಂಕಿಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯದ ಗೃಹ ಬಳಕೆಯ ವೆಚ್ಚದ ಸಮೀಕ್ಷೆಯಲ್ಲಿ ವರದಿಯಾಗಿದೆ. ಪರಿಶೀಲನಾ ಅವಧಿಯಲ್ಲಿ ಗ್ರಾಮೀಣ ಭಾರತದ ಸರಾಸರಿ ಮಾಸಿಕ ತಲಾ ಬಳಕೆ ವೆಚ್ಚ- ಎಂಪಿಸಿಇ, ಮೂರು ಸಾವಿರದ ೭೭೩ ರೂಪಾಯಿ ಇದ್ದು, ಈ ಅವಧಿಯಲ್ಲಿ ಭಾರತದ ನಗರ ಪ್ರದೇಶದ ಸರಾಸರಿ ಅಂದಾಜು ಎಂಪಿಸಿಇ, ಆರು ಸಾವಿರದ ೪೫೯ ರೂಪಾಯಿಗಳಷ್ಟಿತ್ತು. ೨೦೨೨-೨೩ರ ಅವಧಿಯಲ್ಲಿ, ಗ್ರಾಮೀಣ ಭಾರತ ತನ್ನ ಮನೆಯ ಬಳಕೆಯ ವೆಚ್ಚದ ೪೬ ಪ್ರತಿಶತವನ್ನು ಆಹಾರಕ್ಕಾಗಿ ಖರ್ಚು ಮಾಡಿದೆ ಎಂದು ಸಮೀಕ್ಷೆ ತಿಳಿಸಿದೆ. ನಗರ ಪ್ರದೇಶದ ಹೆಚ್ಚಿನ ಪ್ರಮಾಣದ ವೆಚ್ಚದಲ್ಲಿ ಆಹಾರ ಪದಾರ್ಥಗಳು, ಪಾನೀಯಗಳು, ಉಪಹಾರಗಳು ಮತ್ತು ಸಂಸ್ಕರಿತ ಆಹಾರಗಳ ಕೊಡುಗೆ ಅತ್ಯಧಿಕವಾಗಿದೆ ಎಂದು ವರದಿಯಲ್ಲಿ ಮಾಹಿತಿ ನೀಡಲಾಗಿದೆ.

<><*<><>*><>

ಛತ್ತೀಸ್‌ಗಢದ ಬಸ್ತಾರ್ ಜಿಲ್ಲೆಯಲ್ಲಿ ಭದ್ರತಾ ಪಡೆಗಳು ಹಾಗೂ ನಕ್ಸಲರ ನಡುವೆ ನಿನ್ನೆ ನಡೆದ ಗುಂಡಿನ ದಾಳಿಯಲ್ಲಿ ಆರು ನಕ್ಸಲರು ಹತರಾಗಿದ್ದರು. ಪೊಲೀಸ್ ಪಡೆಗಳು ಮತ್ತು ಪೀಪಲ್ಸ್ ಲಿಬರೇಶನ್ ಗೆರಿಲ್ಲಾ ಆರ್ಮಿ ಮಿಲಿಟರಿ ಕಂಪನಿ ನಡುವೆ ಘರ್ಷಣೆ ನಡೆಯಿತು ಎಂದು ಪೊಲೀಸರು ತಿಳಿಸಿದ್ದಾರೆ. ಪೂರ್ವ ಬಸ್ತಾರ್ ವಿಭಾಗದ ಪ್ರದೇಶ, ನಾರಾಯಣಪುರ, ಕೊಂಡಗಾಂವ್, ದಾಂತೇವಾಡ, ಬಸ್ತಾರ್ ಜಿಲ್ಲೆಗಳ ಜಿಲ್ಲಾ ಮೀಸಲು ಕಾವಲು ಪಡೆ ಮತ್ತು ೪೫ ನೇ ಬೆಟಾಲಿಯನ್ ಇಂಡೋ-ಟಿಬೆಟಿಯನ್ ಗಡಿ ಪೊಲೀಸ್ ಮತ್ತು ಕೇಂದ್ರೀಯ ಮೀಸಲು ಪೊಲೀಸ್ ಪಡೆಗಳು ಜಂಟಿ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದವು.

<><*<><>*><>

ಕೃತಕ ಬುದ್ಧಿಮತ್ತೆ ದಿವ್ಯಾಂಗರಿಗೆ ವರದಾನವಾಗಲಿದೆ ಎಂದು ಮಹಾರಾಷ್ಟ್ರ ರಾಜ್ಯಪಾಲ ರಮೇಶ್ ಬೈಸ್ ಹೇಳಿದ್ದಾರೆ. ನಿನ್ನೆ ಮುಂಬೈನ ಮಲಾಡ್‌ನಲ್ಲಿ ೧೦೦ ದೃಷ್ಟಿ ವಿಶೇಷಚೇತನ ವಿದ್ಯಾರ್ಥಿಗಳಿಗೆ ಎಐ ಆಧಾರಿತ ಸ್ಮಾರ್ಟ್ ಗ್ಲಾಸ್‌ಗಳನ್ನು ವಿತರಿಸಿದ ಅವರು, ತಾಂತ್ರಿಕ ಪ್ರಗತಿ ವಿಶೇಷಚೇತನರ

ಜೀವನದಲ್ಲಿ ಸಕಾರಾತ್ಮಕ ಬದಲಾವಣೆಗಳನ್ನು ತರುವುದರ ಜೊತೆಗೆ ಅವರ ದೈನಂದಿನ ಜೀವನವನ್ನು ಸುಧಾರಿಸುತ್ತದೆ ಎಂದು ಹೇಳಿದರು. ಭಾರತವು ಅಭಿವೃದ್ಧಿ ಹೊಂದಿದ ರಾಷ್ಟ್ರವಾಗಲು ವಿಶೇಷಚೇತನರು ಸ್ವಾವಲಂಬಿಗಳನ್ನಾಗಿ ಮಾಡುವುದು ಅತ್ಯಗತ್ಯ ಎಂದು ಅವರು ಹೇಳಿದ್ದಾರೆ. ಸುಮಾರು ೨೦ ಸಾವಿರ ರೂಪಾಯಿ ಬೆಲೆಯ ಸ್ಮಾರ್ಟ್ ಗ್ಲಾಸ್‌ಗಳು ದೃಷ್ಟಿಹೀನ ವಿದ್ಯಾರ್ಥಿಗಳಿಗೆ ಅಧ್ಯಯನ ಮಾಡಲು, ಶಾಲೆಗೆ ಪ್ರಯಾಣಿಸಲು ಮತ್ತು ಇತರ ದೈನಂದಿನ ಕಾರ್ಯಗಳನ್ನು ನಿರ್ವಹಿಸಲು ಸಹಾಯ ಮಾಡುತ್ತದೆ. ಈ ಕನ್ನಡಕಗಳು ಲೆನ್ಸ್, ಪ್ರೊಸೆಸರ್ ಮತ್ತು ಸ್ಪೀಕರ್‌ಗಳನ್ನು ಒಳಗೊಂಡಿದೆ.

<><*<><>*><>

ತಾವು ಮಹಾರಾಷ್ಟ್ರದ ಉಪ ಮುಖ್ಯಮಂತ್ರಿಯಾಗಿ ಮುಂದುವರೆಯುವುದಾಗಿ ಬಿಜೆಪಿ ನಾಯಕ ದೇವೆಂದ್ರ ಫಡ್ನವೀಸ್ ತಿಳಿಸಿದ್ದಾರೆ. ಮುಂಬೈನಲ್ಲಿ ನಿನ್ನೆ ನಡೆದ ರಾಜ್ಯ ಬಿಜೆಪಿ ಶಾಸಕಾಂಗ ಪಕ್ಷದ ಸಭೆಯಲ್ಲಿ ಶಾಸಕರು ಫಡ್ನವೀಸ್ ಅವರೇ ನಮ್ಮ ನಾಯಕರಾಗಿ ಮುಂದುವರೆಯಬೇಕು ಎಂದು ಕೈಗೊಂಡ ನಿರ್ಣಯದ ನಂತರ ಅವರು ಈ ವಿಷಯ ತಿಳಿಸಿದ್ದಾರೆ. ಲೋಕಸಭಾ ಚುನಾವಣೆಯಲ್ಲಿ ಮಹಾರಾಷ್ಟ್ರದಲ್ಲಿ ಬಿಜೆಪಿಗೆ ಹಿನ್ನಡೆಯಾಗಿರುವ ಹಿನ್ನೆಲೆಯಲ್ಲಿ ಬೇಸರ ಅಥವಾ ಭಾವೋದ್ವೇಗಕ್ಕೆ ಒಳಗಾಗಿ ಉಪ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಲು ಮುಂದಾಗಿರಲಿಲ್ಲ ಎಂದು ಸ್ಪಷ್ಟಪಡಿಸಿದರು.

<><*<><>*><>

ಉತ್ತರಾಖಂಡ್‌ನ ಡೆಹರಾಡೋನ್‌ನ ಭಾರತೀಯ ಮಿಲಿಟರಿ ಅಕಾಡೆಮಿ- ಐಎಂಎ ನಲ್ಲಿ ನಿನ್ನೆ ನಡೆದ ಪ್ರತಿಷ್ಠಿತ ನಿರ್ಗಮನ ಪಥಸಂಚಲನದಲ್ಲಿ ೩೫೫ ಯುವ ಅಧಿಕಾರಿಗಳು ಪಾಲ್ಗೊಂಡಿದ್ದರು. ಈ ಮೂಲಕ ೩೫೫ ಯುವ ಅಧಿಕಾರಿಗಳು ಭಾರತೀಯ ಸೇನೆಗೆ ಸೇರ್ಪಡೆಗೊಳ್ಳಲಿದ್ದಾರೆ. ಭಾರತೀಯ ಸೇನೆಗೆ ಗೌರವಾನ್ವಿತ ಶ್ರೇಣಿಗಳಿಗೆ ಪ್ರಶಿಕ್ಷಣಾರ್ಥಿಗಳು ಸೇರ್ಪಡೆಗೊಳ್ಳಲಿಕ್ಕೆ ಪೂರಕವಾಗಿ ಸಮಾರಂಭ ನಡೆಯಿತು. ಜಿಒಸಿ ನಾರ್ದರನ್ ಕಮಾಂಡ್ ಲೆಫ್ಟಿನೆಂಟ್ ಜನರಲ್ ಎಮ್.ವಿ.ಸುಚೇಂದ್ರ ಕುಮಾರ್, ನಿರ್ಗಮನ ಪಥಸಂಚಲನದಲ್ಲಿ ಗೌರವ ವಂದನೆ ಸ್ವೀಕರಿಸಿದರು. ಯುದ್ಧ ಕಾಲದಲ್ಲಿ ಹೋರಾಟ, ಅತ್ಯಾಧುನಿಕ ತಂತ್ರಜ್ಞಾನದ ಅಭಿವೃದ್ಧಿ ಮತ್ತು ಆಧುನಿಕ ಕಾರ್ಯತಂತ್ರಗಳ ಕುರಿತು ಅವರು, ವಿವರಿಸಿದರು. ಈ ಸಂದರ್ಭದಲ್ಲಿ ಜೆಂಟ್ಲಮನ್ ಕೆಡೆಟ್ ಪ್ರವೀಣ್ ಸಿಂಗ್ ಅವರಿಗೆ 'ಸ್ವಾರ್ಡ್ ಆಫ್ ಆನರ್' ಪ್ರಶಸ್ತಿ ನೀಡಿ ಗೌರವಿಸಲಾಯಿತು.

<><*<><>*><>

ಹಂಗೇರಿಯ ಬುಡಾಪೆಸ್ಟ್‌ನಲ್ಲಿ ನಡೆದ ಪಾಲಿಯಾಕ್ ಇಮ್ರೆ ಮತ್ತು ವರ್ಗಾ ಜಾನೋಸ್ ಸ್ಮಾರಕ ೨೦೨೪ ಕುಸ್ತಿ ಪಂದ್ಯಾವಳಿಯಲ್ಲಿ ಭಾರತೀಯ ಕುಸ್ತಿಪಟು ರೀತಿಕಾ ಹೂಡಾ ಅವರು, ನಿನ್ನೆ ಮಹಿಳೆಯರ ೭೬ ಕೆಜಿ ವಿಭಾಗದಲ್ಲಿ ಬೆಳ್ಳಿ ಪದಕ ಗೆದ್ದಿದ್ದಾರೆ. ಇದು ಬುಡಾಪೆಸ್ಟ್ ಕುಸ್ತಿ ಶ್ರೇಯಾಂಕದ ಸರಣಿಯಲ್ಲಿ ಭಾರತಕ್ಕೆ ನಾಲ್ಕನೇ ಪದಕವಾಗಿದೆ. ಪುರುಷರ ೫೭ ಕೆಜಿ ಫ್ರೀಸ್ಟೈಲ್‌ನಲ್ಲಿ ಅಮನ್ ಸೆಹ್ರಾವತ್ ಬೆಳ್ಳಿ ಗೆದ್ದರೆ, ಮಹಿಳೆಯರ ೫೩ ಕೆಜಿ ಮತ್ತು ೫೭ ಕೆಜಿ ತೂಕದ ವಿಭಾಗದಲ್ಲಿ ಆಂಟಿಮ್ ಪಂಗಲ್ ಮತ್ತು ಅಂಶು ಮಲಿಕ್ ಬೆಳ್ಳಿ ಪದಕ ಗೆದ್ದರು. ಕಿರ್ಗಿಸ್ತಾನ್‌ನ ಬಿಷ್ಕೆಕ್‌ನಲ್ಲಿ ನಡೆದ ಏಷ್ಯನ್ ಕುಸ್ತಿ ಒಲಿಂಪಿಕ್ ಅರ್ಹತಾ ಪಂದ್ಯಗಳಿಂದ ಮಹಿಳೆಯರ ೭೬ ಕೆಜಿ ವಿಭಾಗದಲ್ಲಿ ರೀತಿಕಾ ಪ್ಯಾರಿಸ್ ಒಲಿಂಪಿಕ್ಸ್ ಕೋಟಾವನ್ನು ಪಡೆದುಕೊಂಡರು.

**<><*<><>*><>**

ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್ ಟೂರ್ನಿಯಲ್ಲಿ ಇಂದು ನ್ಯೂಯಾರ್ಕ್‌ನ ನಸ್ಸೌ ಕೌಂಟಿ ಅಂತರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯಲಿರುವ ಎ ಗುಂಪಿನ ಎರಡನೇ ಪಂದ್ಯದಲ್ಲಿ ಭಾರತ, ತನ್ನ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನ ತಂಡವನ್ನು ಎದುರಿಸಲಿದೆ. ಪಂದ್ಯದ ಗೆಲುವಿಗಾಗಿ ಉಭಯ ತಂಡಗಳು ತೀವ್ರ ಪೈಪೋಟಿ ನಡೆಸಲು ಸಿದ್ಧತೆ ಮಾಡಿಕೊಂಡಿವೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಪ್ರಾರಂಭವಾಗಲಿದೆ. ರೋಹಿತ್ ಶರ್ಮಾ ನೇತೃತ್ವದ ಭಾರತ ತಂಡ, ಐರ್ಲೆಂಡ್ ವಿರುದ್ಧ ಎಂಟು ವಿಕೆಟ್‌ಗಳ ಭರ್ಜರಿ ಜಯದೊಂದಿಗೆ ತನ್ನ ಗೆಲುವಿನ ಅಭಿಯಾನ ಆರಂಭಿಸಿದೆ. ಇದಕ್ಕೆ ವ್ಯತಿರಿಕ್ತವಾಗಿ, ಪಾಕಿಸ್ತಾನ ತಂಡ, ಅಮೆರಿಕ ವಿರುದ್ಧ ಆಶ್ಚರ್ಯಕರ ರೀತಿಯಲ್ಲಿ ಸೂಪರ್ ಓವರ್ ಸೋಲನ್ನು ಅನುಭವಿಸಿದ್ದು, ಸೂಪರ್ ೮ ಹಂತಕ್ಕೆ ಪ್ರಗತಿಗೆ ಇಂದಿನ ಪಂದ್ಯ ನಿರ್ಣಾಯಕವಾಗಿದೆ.

**<><*<><>*><>**

ರೋಲ್ಯಾಂಡ್ ಗ್ಯಾರಿಸ್‌ನಲ್ಲಿ ನಿನ್ನೆ ನಡೆದ ಫ್ರೆಂಚ್ ಓಪನ್ ಟೆನಿಸ್ ಮಹಿಳಾ ಸಿಂಗಲ್ಸ್ ಫೈನಲ್‌ನಲ್ಲಿ ವಿಶ್ವದ ನಂ.೧ ಆಟಗಾರ್ತಿ ಪೋಲೆಂಡ್‌ನ ಇಗಾ ಸ್ವಿಟೆಕ್ ಇಟಲಿಯ ಜಾಸ್ಮಿನ್ ಪಯೋಲಿನಿ ಅವರನ್ನು ೬-೨, ೬-೧ ಸೆಟ್‌ಗಳಿಂದ ಪರಾಭವಗೊಳಿಸಿ ಪ್ರಶಸ್ತಿ ಗೆದ್ದುಕೊಂಡಿದ್ದಾರೆ. ಈ ಮೂಲಕ ಮೂರು ನೇರ ಫ್ರೆಂಚ್ ಓಪನ್ ಪ್ರಶಸ್ತಿಗಳನ್ನು ಗೆದ್ದ ಮೂರನೇ ಮಹಿಳಾ ಆಟಗಾರ್ತಿ ಎನಿಸಿಕೊಂಡಿದ್ದಾರೆ. ಇಂದು ನಡೆಯಲಿರುವ ಪುರುಷರ ಸಿಂಗಲ್ಸ್ ಫೈನಲ್ ಪಂದ್ಯದಲ್ಲಿ, ಕಾರ್ಲೋಸ್ ಅಲ್ಕರಾಜ್ ಅವರು ಜರ್ಮನಿಯ ಅಲೆಕ್ಸಾಂಡರ್ ಜ್ವೆರೆವ್ ವಿರುದ್ಧ ಪ್ರಶಸ್ತಿಗಾಗಿ ಸೆಣಸಲಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ <>*><>**